# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1244** |
| ಉತ್ತರಿಸಬೇಕಾದ ದಿನಾಂಕ | : | 30.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ವಸತಿ ರಹಿತರಿಗೆ ಬಡವರಿಗೆ ಹಾಗೂ ಕೂಲಿ ಕಾರ್ಮಿಕರಿಗೆ ವಿವಿಧ ವಸತಿ ಯೋಜನೆಗಳ ಅಡಿ ಮನೆಗಳನ್ನು ಮಂಜೂರು ಮಾಡುವ ಯೋಜನೆಗಳಿವೆಯೇ :</td><td rowspan="2">ರಾಜ್ಯದಲ್ಲಿ ವಸತಿ ರಹಿತ ಬಡವರಿಗೆ ಹಾಗೂ ಕೂಲಿ ಕಾರ್ಮಿಕರಿಗೆ ಕೆಳಕಂಡ ಯೋಜನೆಗಳಡಿಯಲ್ಲಿ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ.<br><br>• ಬಸವ ವಸತಿ ಯೋಜನೆ<br>• ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ ಮತ್ತು ನಗರ)<br>• ವಾಜಪೇಯಿ ನಗರ ವಸತಿ ಯೋಜನೆ<br>• ದೇವರಾಜ್ ಅರಸು ವಸತಿ ಯೋಜನೆ (ಗ್ರಾಮೀಣ ಮತ್ತು ನಗರ)<br>• ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ & ನಗರ)<br>• ಮುಖ್ಯ ಮಂತ್ರಿಗಳ ಒಂದು ಲಕ್ಷ ಬಹು ಮಹಡಿ ಬೆಂಗಳೂರು ವಸತಿ ಯೋಜನೆ.<br><br>ವಿಶೇಷ ವರ್ಗದ ವಸತಿ ರಹಿತರಿಗೆ ದೇವರಾಜ್ ಅರಸು ವಸತಿ ಯೋಜನೆಯಡಿ ವಸತಿ ಸೌಕರ್ಯ ಕಲ್ಪಿಸುವ ಸಂಬಂಧ ಇತರೆ ನಿಗಮ/ಇಲಾಖೆ/ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಮನೆಗಳ ಭೌತಿಕ ಗುರಿ ಹಾಗೂ ಅನುದಾನವನ್ನು ನೀಡಲಾಗುತ್ತಿದ್ದು, ಈ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು ವಿವರ ಕೆಳಕಂಡಂತಿದೆ.<br><br><table><tr><td>1</td><td>ಡಾ ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ</td><td>ಚರ್ಮ ಕುಶಲಕರ್ಮಿಗಳು</td></tr><tr><td>2</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ</td><td>ಅಲೆಮಾರಿ ಅರೆ ಅಲೆಮಾರಿ ಜನಾಂಗ</td></tr><tr><td>3</td><td>ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ</td><td>ಕುಶಲಕರ್ಮಿಗಳು</td></tr><tr><td>4</td><td>ಕೈಮಗ್ಗ ಮತ್ತು ಜವಳಿ ಇಲಾಖೆ</td><td>ನೇಕಾರರು</td></tr><tr><td>5</td><td>ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ</td><td>ದೇವದಾಸಿ</td></tr></table></td></tr>
<tr><td>(ಆ)</td><td>ಹಾಗಿದ್ದಲ್ಲಿ ಯಾವ ಯಾವ ಯೋಜನೆಗಳಡಿ ಯಾವ ನಿಗಮದಿಂದ ಮನೆಗಳನ್ನು ಮಾಡಲಾಗುತ್ತದೆ :</td></tr>
<tr><td>(ಇ)</td><td>2018-19ರಿಂದ 2020-21ರಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆ ಹಂಚಿಕೆ ಮಾಡಲಾಗಿದೆ : (ಜಿಲ್ಲಾವಾರು ಮಾಹಿತಿ ನೀಡುವುದು)</td><td>2018-19 ರಿಂದ 2020-21 ರಲ್ಲಿ ವಿವಿದ ಯೋಜನೆಯಡಿ 25891 ಮನೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br><br>ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾ)ದಡಿ 2020-21 ನೇ ಸಾಲಿಗೆ ಕೇಂದ್ರ ಸರ್ಕಾರದಿಂದ 1,51,715 ಮನೆಗಳ ಗುರಿಯನ್ನು ನೀಡಲಾಗಿದೆ.</td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಈ) | ಮನೆ ಮಂಜೂರಾತಿ ನೀಡಲು ನಿಗಧಿಪಡಿಸಿದ ಮಾನದಂಡಗಳೇನು : (ಸಂಪೂರ್ಣ ವಿವರ ನೀಡುವುದು) | ಸದರಿ ವಸತಿ / ನಿವೇಶನ ಯೋಜನೆಗಳಡಿಯಲ್ಲಿ ವಸತಿ ಸೌಲಭ್ಯವನ್ನು ಪಡೆಯಲು ಅರ್ಹತೆಗಳನ್ನು ಹೊಂದಿರುವ ಮಾನದಂಡಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| (ಉ) | ಈ ಹಿಂದೆ ಮಂಜೂರಾದ ಮನೆಗಳಿಗೆ ಹಣ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : ಬಂದಿದ್ದಲ್ಲಿ ಸರ್ಕಾರ ಹಣ ಬಿಡುಗಡೆ ಮಾಡಲು ಯಾವ ಕ್ರಮ ಕೈಗೊಂಡಿದೆ ? | ವಸತಿ ಯೋಜನೆಗಳಡಿ ಅನರ್ಹ ಫಲಾನುಭವಿಗಳು ಆಯ್ಕೆಯಾಗಿರುವುದು ಕಂಡು ಬಂದಿರುವುದರಿಂದ ವಿವಿಧ ವಸತಿ ಯೋಜನೆಗಳಡಿ ಅನುದಾನ ದುರ್ಬಳಕೆಯನ್ನು ತಡೆಹಿಡಿಯುವ ಉದ್ದೇಶದಿಂದ, ಸರ್ಕಾರದ ಆದೇಶ ಸಂಖ್ಯೆ: ವಇ. 54 ಹೆಚ್ಎಂ 2019, ದಿನಾಂಕ: 16.11.2019 ರನ್ವಯ ಪ್ರಗತಿಯಲ್ಲಿರುವ ಮತ್ತು ಅನುದಾನ ಬಿಡುಗಡೆಗೆ ಬೇಡಿಕೆ ಇರುವ ಮನೆಗಳನ್ನು Geo ಆಧಾರಿತ Vigil App ಮೂಲಕ ಪರಿಶೀಲಿಸಿ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುತ್ತಿದೆ. Vigil App ಮುಖಾಂತರ ಪರಿಶೀಲಿಸಿ ಅರ್ಹಗೊಂಡ ಮನೆಗಳಿಗೆ ರಾಜ್ಯಾದ್ಯಂತ ಒಟ್ಟು ರೂ.893.07 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಇನ್ನುಳಿದ ಫಲಾನುಭವಿಗಳು ನಿರ್ಮಿಸಿಕೊಂಡ ಮನೆಗಳ ಪರಿಶೀಲನಾ ಕಾರ್ಯ ಜಿಲ್ಲಾ ಮಟ್ಟದಲ್ಲಿ ಪ್ರಗತಿಯಲ್ಲಿದ್ದು, ಪರಿಶೀಲನಾ ವರದಿ ಬಂದ ನಂತರ ಅನುದಾನ ಬಿಡುಗಡೆ ಮಾಡಲಾಗುತ್ತದೆ. |

ಸಂಖ್ಯೆ :ವಇ 342 ಹೆಚ್ಎಂ 2020

**(ವಿ. ಸೋಮಣ್ಣ)**
ವಸತಿ ಸಚಿವರು.

# ಅನುಬಂಧ-1

- ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ). ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರೀಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.
- 2018ನೇ ಸಾಲಿನ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಗುರುತಿಸಲಾದ ವಸತಿ ರಹಿತರ ಸಮೀಕ್ಷೆಯ ಪಟ್ಟಿಯಲ್ಲಿದ್ದು, ಸ್ವತಃ ನಿವೇಶನ ಹೊಂದಿರಬೇಕು.
- ಅರ್ಜಿದಾರರ ಕುಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದವರಾಗಿದ್ದಲ್ಲಿ ರೂ. 32000/- ಕ್ಕಿಂತ ಕಡಿಮೆ ಇರಬೇಕು ಹಾಗೂ ನಗರ ಪ್ರದೇಶದವರಾಗಿದ್ದಲ್ಲಿ ರೂ.87,600/-ಕ್ಕಿಂತ ಕಡಿಮೆ ಇರಬೇಕು.
- ಅರ್ಜಿದಾರರ ಕುಟುಂಬವು ವಸತಿರಹಿತರಾಗಿದ್ದು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.
- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.)
- ಬೇರೆ ಯಾವುದೇ ಯೋಜನೆ/ ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು.
- ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದಿಂದ ನೀಡಲಾದ ಸಾಮಾಜಿಕ ಆರ್ಥಿಕ ಮತ್ತು ಜಾತಿ ಜನಗಣತಿ 2011ರ ಪಟ್ಟಿಯಲ್ಲಿ ಹೆಸರು ಸೇರಿರಬೇಕು.
- ಡಾ.ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿರಬೇಕು. ಈ ವರ್ಗದ ವಸತಿ ರಹಿತರಿಗೆ ಬೇಡಿಕೆ ಆಧಾರಿತವಾಗಿ ವಸತಿ ಕಲ್ಪಿಸಲಾಗುವುದು.